# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಮಂಡ್ಯ

## ನೇಮಕಾತಿ ಅಧಿಸೂಚನೆ ಸಂಖ್ಯೆ:ಸಿಆರ್‌ಆರ್.(ಡಿ.ಆರ್.)02/2021

ದಿನಾಂಕ:03.03.2021.

ವಿಷಯ: ಮಂಡ್ಯ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಹಿಂಬಾಕಿ ಇರುವ 7 ಮತ್ತು ಹೊಸದಾಗಿ ಅನುಮತಿಸಲಾದ 1 ಒಟ್ಟು 8 ಬೆರಳಚ್ಚುಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ ಘಟಕದಲ್ಲಿ ಹಿಂಬಾಕಿ ಇರುವ 7 ಮತ್ತು ಹೊಸದಾಗಿ ಅನುಮತಿಸಲಾದ 1 ಒಟ್ಟು 8 ಬೆರಳಚ್ಚುಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಧಿಸೂಚನೆಗೆ ಸಂಬಂಧಪಟ್ಟ ಮಾಹಿತಿ ಹಾಗೂ ಅರ್ಜಿ ನಮೂನೆಯು ಈ ಕಛೇರಿಯ ವೆಬ್‌ಸೈಟ್ **https://districts.ecourts.gov.in/mandya** ದಲ್ಲಿ ಲಭ್ಯವಿರುತ್ತದೆ.

ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 03.04.2021 ಸಂಜೆ 4.00 ಗಂಟೆಯ ಒಳಗೆ ಮಂಡ್ಯ ಜಿಲ್ಲಾ ನ್ಯಾಯಾಲಯ ಕಛೇರಿಯಲ್ಲಿ ಸಲ್ಲಿಸತಕ್ಕದ್ದು. ಒಂದು ವೇಳೆ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿದ್ದಲ್ಲಿ, ಮುಂದಿನ ಕೆಲಸದ ದಿನದ ಕಛೇರಿಯ ಅವಧಿಯಲ್ಲಿ ಅರ್ಜಿಗಳನ್ನು ಸಲ್ಲಿಸುವುದು. ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಅರ್ಜಿ ಸಲ್ಲಿಸಬೇಕಾದ ವಿಳಾಸ: ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಮಂಡ್ಯ ಜಿಲ್ಲೆ, ಮಂಡ್ಯ

1. ಬೆರಳಚ್ಚುಗಾರರು: (**Typist**): ಹುದ್ದೆಗಳ ಸಂಖ್ಯೆ: 8

ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳೊಂದಿಗೆ.

ಹಿಂಬಾಕಿ ಹುದ್ದೆ : 07

| ಮೀಸಲಾತಿ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕ | ಒಟ್ಟು |
|---|---|---|---|---|
| ಸಾಮಾನ್ಯ ವರ್ಗ | 01 | 01 | - | 02 |
| ಪರಿಶಿಷ್ಟ ಜಾತಿ | - | - | 01 | 01 |
| ಪರಿಶಿಷ್ಟ ಪಂಗಡ | 01 | - | - | 01 |
| ಪ್ರವರ್ಗ-2 ಎ | - | - | 01 | 01 |
| ಪ್ರವರ್ಗ-2 ಬಿ | 01 | - | - | 01 |
| ಪ್ರವರ್ಗ – 3 ಎ | 01 | - | - | 01 |
| ಒಟ್ಟು | 04 | 01 | 02 | 07 |

ಖಾಲಿ ಇರುವ ಹುದ್ದೆ : 01

| ಮೀಸಲಾತಿ | ಮಹಿಳೆ | ಒಟ್ಟು |
|---|---|---|
| ಸಾಮಾನ್ಯ ವರ್ಗ | 01 | 01 |
| ಒಟ್ಟು | 01 | 01 |

ಶೈಕ್ಷಣಿಕ ವಿದ್ಯಾರ್ಹತೆ:

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣತೆ ಹಾಗೂ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಹಿರಿಯ ಶ್ರೇಣಿ ಪರೀಕ್ಷೆಗಳಲ್ಲಿ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

ಆಯ್ಕೆ ವಿಧಾನ:

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನಡೆಸಲಾಗುವುದು.
- 15 ನಿಮಿಷಗಳ ಉಕ್ತಲೇಖನವನ್ನು ಬೆರಳಚ್ಚುಪಡಿಸತಕ್ಕದ್ದು.
- ಸಂದರ್ಶನ.

ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು;

(ಅ) ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

(ಆ) ಗರಿಷ್ಟ ವಯೋಮಿತಿ:

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 | 40 ವರ್ಷ |

ವಯೋಮಿತಿ ಸಡಿಲಿಕೆ:

- ಮಾಜಿ ಸೈನಿಕರಿಗೆ ಗರಿಷ್ಟ ವಯೋಮಿತಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ ಮತ್ತು ವಿಧವೆಯರಿಗೆ ಮತ್ತು ಅಂಗವಿಕಲರಿಗೆ 10 ವರ್ಷಗಳ ಸಡಿಲಿಕೆ. ಇದಕ್ಕೆ ಸಂಬಂಧಿಸಿದಂತೆ ವಯೋಮಿತಿ ರಿಯಾಯಿತಿ ಕೋರುವ ಅರ್ಜಿದಾರರು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದಿರುವ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು.

- ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಠ ವಯೋಮಿತಿಯನ್ನು, ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

- ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ, ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

- ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ, ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

- ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು, ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

<u>ಅರ್ಜಿ ಸಲ್ಲಿಸುವ ವಿಧಾನಃ</u>

- ಅಭ್ಯರ್ಥಿಯು ಈ ಅಧಿಸೂಚನೆಯ ಜೊತೆಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಕೋರಲಾದ ಎಲ್ಲಾ ವಿವರಗಳನ್ನು ಸುಸ್ಪಷ್ಟವಾಗಿ ಭರ್ತಿ ಮಾಡಿ ಅರ್ಜಿ ಸಲ್ಲಿಸತಕ್ಕದ್ದು. ಸರಿಯಾಗಿ ಅಂಕಣಗಳನ್ನು ಭರ್ತಿಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ತೋರಿಸುವ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳ ಸ್ವಯಂದೃಢೀಕರಿಸಿದ ದಾಖಲೆಗಳನ್ನು ಸಲ್ಲಿಸಬೇಕು

- ಜಾತಿ ಮೀಸಲಾತಿ / ಗ್ರಾಮೀಣ ಮೀಸಲಾತಿ/ ಮಾಜಿ ಸೈನಿಕ/ ಅಂಗವಿಕಲ, ಇತರೇ ಯಾವುದೇ ಮೀಸಲಾತಿ ಕೋರುವ ಬಗ್ಗೆ ಸಂಬಂಧಿಸಿದ ಪ್ರಾಧಿಕಾರ/ ಕಛೇರಿಯಿಂದ ಪಡೆದ ದಾಖಲಾತಿಗಳ ಸ್ವಯಂದೃಢೀಕರಿಸಿದ ದಾಖಲೆಗಳನ್ನು ಸಲ್ಲಿಸಬೇಕು.

- ಗ್ರಾಮೀಣ ಮೀಸಲಾತಿ ಕೋರುವ ಅಭರ್ಥಿಗಳು ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರಗಳನ್ನು ಆಯಾ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುಸಹಿ ಮಾಡಿ ಸಲ್ಲಿಸಬೇಕು

- ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭರ್ಥಿಗಳು, ನಮೂನೆ - 2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ - 1 ರಲ್ಲಿ ಮೇಲುರುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

- ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ ವರ್ಗಾವಣೆ ಪತ್ರ/ ಇನ್ಯಾವುದೇ ಅಧಿಕೃತ ದಾಖಲಾತಿಗಳು.

- ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ, ಅದರ ಮೇಲೆ ಸಹಿ ಮಾಡತಕ್ಕದ್ದು.

<u>ನಿಗದಿತ ಅರ್ಜಿ ಶುಲ್ಕ:</u>

| ವಿವಿಧ ವರ್ಗೀಕರಣ | ಬೆರಳಚ್ಚುಗಾರರ ಹುದ್ದೆಗೆ |
|---|---|
| ಸಾಮಾನ್ಯ ವರ್ಗ | ರೂ. 200/- |
| ಪ್ರವರ್ಗ-2ಎ, 2ಬಿ, 3ಎ, 3 ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 100/- ಅರ್ಜಿ ಶುಲ್ಕ ಪಾವತಿಸಬೇಕು. |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ -1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇರುತ್ತದೆ. | |

<u>ಅರ್ಜಿಶುಲ್ಕ ಪಾವತಿಸಬೇಕಾದ ವಿಧಾನ:</u>

ನಿಗದಿತ ಶುಲ್ಕವನ್ನು ಡಿ.ಡಿ. ಮುಖಾಂತರ ಮಾತ್ರ ಸ್ವೀಕರಿಸಲಾಗುವುದು ಮತ್ತು ಯಾವುದೇ ಎಂ.ಓ./ಚೆಕ್/ಪೋಸ್ಟಲ್ ಆರ್ಡ್‌ರ/ಚಲನಗಳನ್ನು ಸ್ವೀಕರಿಸಲಾಗುವುದಿಲ್ಲ. ಡಿ.ಡಿ.ಯನ್ನು ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮಂಡ್ಯ ಜಿಲ್ಲೆ, ಮಂಡ್ಯರವರ ಹೆಸರಿನಲ್ಲಿ ಈ ಅಧಿಸೂಚನೆಯನ್ನು ಹೊರಡಿಸಿದ ದಿನಾಂಕದ ನಂತರ ಹಾಗೂ ಕೊನೆಯ ದಿನಾಂಕದೊಳಗೆ ತೆಗೆದುಕೊಂಡಿರತಕ್ಕದ್ದು ಹಾಗೂ ನಿಗದಿತ ಅರ್ಜಿಯೊಂದಿಗೆ ಲಗತ್ತಿಸಿ ಈ ನ್ಯಾಯಾಲಯಕ್ಕೆ ಕೊನೆಯ ದಿನಾಂಕದೊಳಗೆ ಅರ್ಜಿಯ ಜೊತೆಗೆ ಸಲ್ಲಿಸತಕ್ಕದ್ದು. ಕೊನೆಯ ದಿನಾಂಕದ ನಂತರ ಬಂದಂತಹ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

<u>ಅಭ್ಯರ್ಥಿಗಳಿಗೆ ಸೂಚನೆ:-</u>

1. ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

2. ಅಪೂರ್ಣವಾಗಿರುವ, ಸಹಿ ಮಾಡದ, ವಿದ್ಯಾರ್ಹತೆ, ಮೀಸಲಾತಿ, ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳ ಪ್ರತಿಗಳನ್ನು ಸಲ್ಲಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ಅರ್ಜಿದಾರರು ಯಾವ ಹುದ್ದೆಗೆ ಅರ್ಜಿ ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರಗಳಲ್ಲಿ ಅರ್ಜಿಯಲ್ಲಿ ನಮೂದಿಸಿರಬೇಕು.

4. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಅರ್ಹತಾ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗತಕ್ಕದ್ದು.

5. ಅಭ್ಯರ್ಥಿಗೆ ಅರ್ಹತಾ ಪರೀಕ್ಷೆ/ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ, ಅವರು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸಲಾಗುವುದಿಲ್ಲ.

<u>ಪರಿವೀಕ್ಷಣಾ ಅವಧಿಃ</u>

ಆಯ್ಕೆಯಾದ ಅಭ್ಯರ್ಥಿಗಳು, ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕರ್ನಾಟಕ ಸರ್ಕಾರದ ನಿಯಮಾನುಸಾರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

3.3.2017

(ಎಸ್. ಬಿ. ವಸ್ತ್ರಮಠ)

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಮಂಡ್ಯ.

Prl District and Sessions Judge

MANDYA.

ಪ್ರತಿಯನ್ನು ಮಾನ್ಯ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

<u>ಪ್ರತಿಯನ್ನುಃ-</u>

1. ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಗದಗ, ಕಲ್ಬುರ್ಗಿ, ಹಾಸನ, ಹಾವೇರಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮೈಸೂರು, ರಾಯಚೂರು, ರಾಮನಗರ, ತುಮಕೂರು, ಉಡುಪಿ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.

2. ನಿರ್ದೇಶಕರು, ರಾಜ್ಯ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು, ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

3. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು - ಇವರಿಗೆ.

4. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಮಂಡ್ಯ ಜಿಲ್ಲೆ, ಮಂಡ್ಯ -ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

5. ಮಂಡ್ಯ ಜಿಲ್ಲೆಯ ಎಲ್ಲಾ ಅಧೀನ ನ್ಯಾಯಲಯಗಳಿಗೆ, ವ್ಯಾಪಕ ಪ್ರಚಾರಕ್ಕಾಗಿ.

6. ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಸೂಚನಾ ಫಲಕಕ್ಕೆ, ಹಾಗೂ

7. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.

# ಅರ್ಜಿ ನಮೂನೆ

ಸ್ವದೃಢೀಕರಿಸಿದ
ಪಾಸ್‌ಪೋರ್ಟ್
ಅಳತೆಯ ಇತ್ತೀಚಿನ
ಭಾವಚಿತ್ರವನ್ನು
ಅಂಟಿಸಬೇಕು.

ರವರಿಗೆ,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮಂಡ್ಯ

ಮಾನ್ಯರೇ,

ತಮ್ಮ ನ್ಯಾಯಾಲಯದ ಅಧಿಸೂಚನೆ ಸಂಖ್ಯೆಃಸಿಆರ್‌ಆರ್.(ಡಿ.ಆರ್.)**02/2021** ದಿನಾಂಕಃ **03.03.2021** ರ ಪ್ರಕಟಣೆ ಮೇರೆಗೆ ನಾನು ಕೆಳಕಂಡ ಮಾಹಿತಿಗಳೊಂದಿಗೆ ಬೆರಳಚ್ಚುಗಾರರ ಹುದ್ದೆಗೆ ____________________ ಮೀಸಲಾತಿಯಡಿಯಲ್ಲಿ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

| | | | |
|---|---|---|---|
| 1. | ಅಭ್ಯರ್ಥಿಯ ಹೆಸರು<br>(ದಪ್ಪ ಅಕ್ಷರಗಳಲ್ಲಿ) | | |
| 2. | ತಂದೆ/ತಾಯಿ/ಗಂಡನ ಹೆಸರು | | |
| 3. | ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ ಮತ್ತು<br>ಇ- ಮೇಲ್ ವಿಳಾಸಃ | | |
| 4. | ಜನ್ಮ ದಿನಾಂಕ | | |
| 5. | ಲಿಂಗ | ಪುರುಷ | ಮಹಿಳೆ |
| 6. | ರಾಷ್ಟ್ರೀಯತೆ :<br>ಧರ್ಮ ಮತ್ತು ಜಾತಿ : | | |
| 7. | ವೈವಾಹಿಕ ಸ್ಥಿತಿ | ವಿವಾಹಿತ | ಅವಿವಾಹಿತ |
| 8. | ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ? | | |
| 9. | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರ? | ಹೌದು | ಇಲ್ಲ |
| 10. | ಅಭ್ಯರ್ಥಿಯು ಸರ್ಕಾರಿ / ಅರೆ ಸರ್ಕಾರಿ ಸೇವೆಯಲ್ಲಿ ಇದ್ದೀರಾ? | | |
| 11. | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ? | ಹೌದು | ಇಲ್ಲ |

| | | | | |
|---|---|---|---|---|
| 12. | ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು:- (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) ಸೂ: ಅನ್ವಯಿಸುವ ವಿದ್ಯಾರ್ಹತೆಯ ಅಂಕಣಗಳನ್ನು ಮಾತ್ರ ಭರ್ತಿ ಮಾಡುವುದು. | | | |
| | ಶೈಕ್ಷಣಿಕ ವಿದ್ಯಾರ್ಹತೆ | ಗರಿಷ್ಠ ಅಂಕಗಳು | ಪಡೆದ ಅಂಕಗಳು | ಶೇಕಡವಾರು ಅಂಕಗಳು |
| | ಎಸ್.ಎಸ್.ಎಲ್.ಸಿ | | | |
| | ಕನ್ನಡ ಬೆರಳಚ್ಚು ಹಿರಿಯ ಶ್ರೇಣಿ | | | |
| | ಆಂಗ್ಲ ಬೆರಳಚ್ಚು ಹಿರಿಯ ಶ್ರೇಣಿ | | | |
| 13. | ಅಭ್ಯರ್ಥಿಯು ಪ.ಜಾ., ಪ.ಪಂ., 2ಎ, 2ಬಿ, 3ಎ ವರ್ಗಕ್ಕೆ ಸೇರಿದ್ದಲ್ಲಿ ಜಾತಿ ಪ್ರಮಾಣ ಪತ್ರದ ನಕಲನ್ನು ಲಗತ್ತಿಸತಕ್ಕದ್ದು. ಈ ವರ್ಗಕ್ಕೆ ಸೇರದಿದ್ದಲ್ಲಿ ಸಾಮಾನ್ಯ ಅಭ್ಯರ್ಥಿ ಎಂದು ನಮೂದಿಸತಕ್ಕದ್ದು | | | |
| 14. | ಅಭ್ಯರ್ಥಿಯು ಗ್ರಾಮೀಣ/ ಮಾಜಿ ಸೈನಿಕ/ ಅಂಗವಿಕಲ ಮೀಸಲಾತಿಗೆ ಸೇರಿದ್ದಲ್ಲಿ ಸಂಬಂಧಪಟ್ಟ ಪ್ರಮಾಣ ಪತ್ರದ ನಕಲನ್ನು ಲಗತ್ತಿಸತಕ್ಕದ್ದು. | | | |
| 15 | ಡಿ.ಡಿ. ನಂಬರ, ದಿನಾಂಕ ಹಾಗೂ ಪಡೆದುಕೊಂಡ ಬ್ಯಾಂಕಿನ ಹೆಸರು ಮತ್ತು ಶಾಖೆಯನ್ನು ನಮೂದಿಸುವುದು ಅಲ್ಲದೇ ಡಿ.ಡಿ.ಯ ಹಿಂಬದಿಯಲ್ಲಿ ತಮ್ಮ ಹೆಸರು ಹಾಗೂ ಸಲ್ಲಿಸುವ ಹುದ್ದೆಯನ್ನು ತಪ್ಪದೇ ನಮೂದಿಸುವುದು. | | | |

ಸೂಚನೆ: ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

## ಘೋಷಣೆ:-

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಮತ್ತು ಸರಿಯಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡುಬಂದಲ್ಲಿ ನನ್ನ ಅರ್ಜಿಯನ್ನು ರದ್ದುಪಡಿಸಬಹುದು ಎಂದು ಈ ಮೂಲಕ ಘೋಷಿಸುತ್ತೇನೆ.

ಸ್ಥಳ:

ದಿನಾಂಕ: ಅಭ್ಯರ್ಥಿಯ ಸಹಿ.